ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

KSTDC ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ಸ್ವೀಕರಿಸಿರುವ ಅರ್ಜಿಗಳ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-

278 (459) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಮಗ (KSTDC) ದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ನಿಗಮದಲ್ಲಿ ಗುತ್ತಿಗೆಯಡಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹೆಸರು, ಹುದ್ದೆಯ ಪದನಾಮ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಇ) ನಿಗಮದಲ್ಲಿ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ ; ಬಾಕಿ ಉಳಿದಿರುವ ಅಭ್ಯರ್ಥಿಗಳೆಷ್ಟು ; ಅರ್ಜಿ ಸಲ್ಲಿಸಿರುವ ದಿನಾಂಕ ಹಾಗೂ ವಿಳಾಸದೊಂದಿಗೆ ಮಾಹಿತಿ ನೀಡುವುದು;

(ಈ) ಸರ್ಕಾರ ಯಾವ ಕಾಲ ಮಿತಿಯೊಳಗೆ ಈ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸುವುದು ?